**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:14-08-2020.

## ಆದೇಶ

1. ಕೇಂದ್ರೀಯ ಗೃಹ ಮಂತ್ರಾಲಯವು ಆದೇಶ ಸಂಖ್ಯೆ:40-3/2020-ಡಿಎಂ-ಐ(ಎ), ದಿನಾಂಕ:29.07.2020ರಲ್ಲಿ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ನಿರ್ದೇಶನದನ್ವಯ ಕಂಟೈನ್‌ಮೆಂಟ್ ವಲಯಗಳಲ್ಲಿ ಲಾಕ್‌ಡೌನ್ ಅವಧಿಯನ್ನು ವಿಸ್ತರಿಸಲು ಹಾಗೂ ಕಂಟೈನ್‌ಮೆಂಟ್ ವಲಯಗಳ ಹೊರಗಿನ ಪ್ರದೇಶಗಳಲ್ಲಿ ಹೆಚ್ಚಿನ ಚಟುವಟಿಕೆಗಳನ್ನು ಪುನಃ ಆರಂಭಿಸಲು ತೆರವು-3 ಮಾರ್ಗಸೂಚಿಗಳನ್ನು ಹೊರಡಿಸಿದೆ. ಇವುಗಳು ದಿನಾಂಕ:31.08.2020ರವರೆಗೆ ಜಾರಿಯಲ್ಲಿರುತ್ತವೆ.

2. ಅದರನ್ವಯ, ರಾಜ್ಯ ಸರ್ಕಾರವು ಕಂಟೈನ್‌ಮೆಂಟ್ ವಲಯಗಳಲ್ಲಿನ ಲಾಕ್‌ಡೌನ್ ಅವಧಿಯನ್ನು ವಿಸ್ತರಿಸಲು ಹಾಗೂ ಕಂಟೈನ್‌ಮೆಂಟ್ ವಲಯಗಳ ಹೊರಗಿನ ಪ್ರದೇಶಗಳಲ್ಲಿ ಹೆಚ್ಚಿನ ಚಟುವಟಿಕೆಗಳನ್ನು ಪುನಃ ಆರಂಭಿಸಲು ತೆರವು-3 ಮಾರ್ಗಸೂಚಿಗಳನ್ನು ಹೊರಡಿಸಿದೆ. ಇವುಗಳು ದಿನಾಂಕ:31.08.2020ರವರೆಗೆ ಜಾರಿಯಲ್ಲಿರುತ್ತವೆ.

3. ಕೇಂದ್ರ ಸರ್ಕಾರವು ಹೊರಡಿಸಿದ ತೆರವು-3ರ ಅವಧಿಯಲ್ಲಿನ ಅನುಮತಿಸಲಾದ ಕಾರ್ಯಚಟುವಟಿಕೆಗಳಲ್ಲಿ "ಸಾಮಾಜಿಕ/ ರಾಜಕೀಯ/ ಕ್ರೀಡೆ/ ಮನೋರಂಜನೆ/ ಶೈಕ್ಷಣಿಕ/ಧಾರ್ಮಿಕ ಕಾರ್ಯಗಳು ಮತ್ತು ಇತರೆ ಬೃಹತ್ ಸಭೆಗಳು" - ಈ ಚಟುವಟಿಕೆಗಳಿಗೆ ಅನುಮತಿ ನೀಡಿರುವುದಿಲ್ಲ. ಅದರಂತೆ, ರಾಜ್ಯ ಸರ್ಕಾರವು ದಿನಾಂಕ:30.07.2020ರಂದು ಹೊರಡಿಸಿದ ಮಾರ್ಗಸೂಚಿಯಲ್ಲಿ ಇವುಗಳಿಗೆ ಅನುಮತಿಯನ್ನು ನೀಡಿರುವುದಿಲ್ಲ.

4. ಕೋವಿಡ್-19 ಸಾಂಕ್ರಾಮಿಕ ಸೋಂಕನ್ನು ನಿಯಂತ್ರಿಸಲು ರಾಜ್ಯ ಸರ್ಕಾರವು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಂಡಿದೆ. ಆದಾಗ್ಯೂ, ಸಕ್ರಿಯ ಪ್ರಕರಣಗಳು ಹೆಚ್ಚಾಗುತ್ತಿವೆ. ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಕೋವಿಡ್-19 ಸಾಂಕ್ರಾಮಿಕ ಸೋಂಕು ಹೆಚ್ಚಿನ ರೀತಿಯಲ್ಲಿ ಹರಡದಂತೆ ಈ ಸೋಂಕಿನ ಸರಪಳಿಯನ್ನು ಕತ್ತರಿಸಲು ಇನ್ನೂ ಹೆಚ್ಚಿನ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕಾದ ಅನಿವಾರ್ಯತೆ ಮತ್ತು ಅವಶ್ಯಕತೆ ಇರುತ್ತದೆ.

5. ಶ್ರೀ ಗಣೇಶ ಚತುರ್ಥಿ ಹಬ್ಬವು ದಿನಾಂಕ: 22-08-2020ರಂದು ಆಚರಣೆಗೆ ಬರಲಿದೆ. ಈ ಹಬ್ಬವನ್ನು ರಾಜ್ಯದಲ್ಲಿ ಪಾರಂಪರಿಕವಾಗಿ ಪ್ರತಿ ವರ್ಷವೂ ವಿಜೃಂಭಣೆಯಿಂದ ಆಚರಿಸಿಕೊಂಡು ಬರಲಾಗುತ್ತಿದೆ. ಪ್ರಸ್ತುತ ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗವು ಹರಡಿರುವುದರಿಂದ ಶ್ರೀ ಗಣೇಶೋತ್ಸವದ ಹಬ್ಬವನ್ನು ಸರಳ ರೀತಿಯಲ್ಲಿ ಭಕ್ತಿ ಪೂರ್ವಕವಾಗಿ ಆಚರಿಸಬೇಕಾಗಿರುತ್ತದೆ.

...2

6. ಈ ಹಿನ್ನೆಲೆಯಲ್ಲಿ, ವಿಪತ್ತು ನಿರ್ವಹಣಾ ಕಾಯ್ದೆ, 2005ರಡಿಯಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷನಾಗಿ ಈ ಕೆಳಗೆ ಸಹಿ ಮಾಡಿರುವ ನಾನು ಮುಂಬರಲಿರುವ ಶ್ರೀ ಗಣೇಶೋತ್ಸವವನ್ನು ಆಚರಿಸುವ ಸಂಬಂಧವಾಗಿ ಈ ಆದೇಶದ "ಅನುಬಂಧ"ದಲ್ಲಿರುವಂತೆ ಮಾರ್ಗಸೂಚಿಗಳನ್ನು ಹೊರಡಿಸಿರುತ್ತೇನೆ. ಈ ಮಾರ್ಗಸೂಚಿಗಳು ಇಂದಿನಿಂದ ಜಾರಿಯಲ್ಲಿರುತ್ತವೆ.

7. ಈ ಮಾರ್ಗಸೂಚಿಗಳನ್ನು ಮಹಾನಗರ ಪಾಲಿಕೆಗಳ ಆಯುಕ್ತರು, ಪೊಲೀಸ್ ಆಯುಕ್ತರು, ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಇತರೆ ಇಲಾಖಾ ಮುಖ್ಯಸ್ಥರುಗಳು ಹಾಗೂ ಇಲಾಖಾ ಪ್ರಾಧಿಕಾರಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸತಕ್ಕದ್ದು.

**(ಟಿ.ಎಂ. ವಿಜಯ್ ಭಾಸ್ಕರ್)**
ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ
ಪ್ರಾಧಿಕಾರದ
ಕಾರ್ಯಕಾರಿ ಸಮಿತಿ ಅಧ್ಯಕ್ಷರು

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

**ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 158 ಟಿಎನ್‌ಆರ್ 2020, ದಿ:14-08-2020ರ ಅನುಬಂಧ**

**ಶ್ರೀ ಗಣೇಶೋತ್ಸವ ಆಚರಿಸುವ ಸಂಬಂಧದ ಮಾರ್ಗಸೂಚಿಗಳು:**

1. ಶ್ರೀ ಗಣೇಶ ಚತುರ್ಥಿ ಹಬ್ಬವನ್ನು ಸರಳ ರೀತಿಯಲ್ಲಿ ಭಕ್ತಿ ಪೂರ್ವಕವಾಗಿ ದೇವಸ್ಥಾನದೊಳಗೆ ಅಥವಾ ತಮ್ಮ ಮನೆಗಳಲ್ಲಿಯೇ ಆಚರಿಸುವುದು.

2. ಶ್ರೀ ಗಣೇಶೋತ್ಸವ ಹಬ್ಬವನ್ನು ಸಾರ್ವಜನಿಕ ಸ್ಥಳ (ಉದಾ: ರಸ್ತೆ, ಗಲ್ಲಿ, ಓಣಿ, ಮೈದಾನ ಇತ್ಯಾದಿ)ಗಳಲ್ಲಿ ಶ್ರೀ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಬಾರದು.

3. ಯಾವುದೇ ಕಾರಣಕ್ಕೂ ಸಾರ್ವಜನಿಕ ನದಿ, ಕೆರೆ, ಕೊಳ, ಬಾವಿ ಮತ್ತು ಕಲ್ಯಾಣಿಗಳಲ್ಲಿ ಶ್ರೀ ಗಣೇಶ ಮೂರ್ತಿಯನ್ನು ವಿಸರ್ಜನೆ ಮಾಡತಕ್ಕದ್ದಲ್ಲ.

4. ಶ್ರೀ ಗಣೇಶೋತ್ಸವದಲ್ಲಿ ಶ್ರೀ ಗಣೇಶ ಮೂರ್ತಿಗಳನ್ನು ತರುವಾಗ ಹಾಗೂ ವಿಸರ್ಜಿಸುವಾಗ ಯಾವುದೇ ಕಾರಣಕ್ಕಾಗಲಿ ಅಥವಾ ಯಾವುದೇ ಸಂದರ್ಭಗಳಲ್ಲಿ ಯಾವುದೇ ರೀತಿಯ ಮೆರವಣಿಗೆಯನ್ನು ಹೊರಡಿಸತಕ್ಕದ್ದಲ್ಲ / ಮಾಡತಕ್ಕದ್ದಲ್ಲ. ಇದನ್ನು ಸಂಪೂರ್ಣವಾಗಿ ನಿರ್ಬಂಧಿಸಿದೆ.

5. ಮನೆಯಲ್ಲಿ ಪ್ರತಿಷ್ಠಾಪಿಸಿದ ಗಣೇಶ ಮೂರ್ತಿಗಳನ್ನು ಅವರ ಮನೆ ಆವರಣದಲ್ಲಿಯೇ ವಿಸರ್ಜನೆ ಮಾಡುವುದು.

6. ಶ್ರೀ ಗಣೇಶ ಹಬ್ಬ ಆಚರಿಸುವ ದೇವಸ್ಥಾನಗಳಲ್ಲಿ ದಿನನಿತ್ಯ ಸ್ಯಾನಿಟೈಸೇಷನ್ ಮಾಡುವುದು ಹಾಗೂ ಸಾರ್ವಜನಿಕ ದರ್ಶನಕ್ಕಾಗಿ ಆಗಮಿಸುವ ಭಕ್ತಾಧಿಗಳಿಗೆ ಸ್ಯಾನಿಟೈಸರ್ ಹಾಗೂ ಥರ್ಮಲ್ ಸ್ಕ್ರೀನಿಂಗ್ ವ್ಯವಸ್ಥೆಯನ್ನು ಕಲ್ಪಿಸುವುದರ ಜೊತೆಗೆ ದರ್ಶನಕ್ಕಾಗಿ ಬರುವ ಭಕ್ತರಿಗೆ ಕನಿಷ್ಠ 06 ಅಡಿ ಸಾಮಾಜಿಕ ಅಂತರವನ್ನು ಗುರುತಿಸುವುದು ಹಾಗೂ ಅದನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು. ದೇವಸ್ಥಾನಕ್ಕೆ ಆಗಮಿಸುವ ಭಕ್ತಾಧಿಗಳು ಮತ್ತು ಸಾರ್ವಜನಿಕರು ಕಡ್ಡಾಯವಾಗಿ ಮುಖಗವಸು ಧರಿಸಿರತಕ್ಕದ್ದು.

7. ಕೋವಿಡ್-19 ಸಾಂಕ್ರಾಮಿಕ ಸೋಂಕು ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಷ್ಟ್ರೀಯ ನಿರ್ದೇಶನಗಳನ್ನು ಹಾಗೂ ರಾಜ್ಯ ಸರ್ಕಾರವು ಹೊರಡಿಸಿದ ಮಾರ್ಗಸೂಚಿಗಳನ್ನು ತಪ್ಪದೇ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ಅಲ್ಲದೇ, ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ, ಮಹಾನಗರ ಪಾಲಿಕೆ, ಮಾಲಿನ್ಯ ನಿಯಂತ್ರಣ ಮಂಡಳಿ, ಅಗ್ನಿಶಾಮಕ ಇಲಾಖೆ, ಜಿಲ್ಲಾಡಳಿತ ಹಾಗೂ ಇತರೆ ಇಲಾಖೆಗಳಿಂದ ಹೊರಡಿಸಲಾದ ಸೂಚನೆ ಹಾಗೂ ಮಾರ್ಗಸೂಚಿಗಳನ್ನು ಸಹ ಕಡ್ಡಾಯವಾಗಿ ಪಾಲಿಸತಕ್ಕದ್ದು.

8. ಶ್ರೀ ಗಣೇಶೋತ್ಸವ ಆಚರಣೆ ಕಾಲಕ್ಕೆ ಸಂದರ್ಭಕ್ಕನುಗುಣವಾಗಿ ಸರ್ಕಾರ, ಜಿಲ್ಲಾಡಳಿತ, ಪೊಲೀಸ್, ಮಹಾನಗರ ಪಾಲಿಕೆ ಹಾಗೂ ಸ್ಥಳೀಯ ಸಂಸ್ಥೆ/ಪ್ರಾಧಿಕಾರಗಳಿಂದ ಹೊರಡಿಸಲಾಗುವ ಎಲ್ಲಾ ಆದೇಶ / ನಿರ್ದೇಶನ ಹಾಗೂ ಸೂಚನೆಗಳನ್ನು ಸಹ ಕಡ್ಡಾಯವಾಗಿ ಪಾಲಿಸತಕ್ಕದ್ದು.

9. ಹಬ್ಬ-ಹರಿದಿನಗಳು ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಾಮರಸ್ಯಗಳು ಉಂಟಾಗಲು ಪೂರಕವಾಗಿರುವುದರಿಂದ ಶ್ರೀ ಗಣೇಶೋತ್ಸವ ಹಬ್ಬವನ್ನು ಅದೇ ರೀತಿಯಿಂದಲೇ ಆಚರಿಸುವ ಮೂಲಕ ಸಮಾಜದಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ಯಾವುದೇ ಭಂಗ ಬಾರದಂತೆ ಕಾಪಾಡುವುದು.

10. ರಾಷ್ಟ್ರೀಯ ನಿರ್ದೇಶನಗಳನ್ನು ಹಾಗೂ ರಾಜ್ಯ ಸರ್ಕಾರದ ಆದೇಶ / ಮಾರ್ಗಸೂಚಿಗಳನ್ನು ಉಲ್ಲಂಘಿಸುವವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ, 2005 ಹಾಗೂ ಭಾರತೀಯ ದಂಡ ಸಂಹಿತೆ ಸೆಕ್ಷನ್ 188ರ ಅಡಿಯಲ್ಲಿ ಶಿಸ್ತಿನ/ಕಾನೂನು ಕ್ರಮ ಮತ್ತು ಅನ್ವಯವಾಗಬಹುದಾದ ಇತರೆ ಕಾನೂನು ಉಪಬಂಧಗಳ ಮೇರೆಗೆ ಕ್ರಮ ಜರುಗಿಸಲಾಗುವುದು.

**(ಟಿ.ಎಂ. ವಿಜಯ್ ಭಾಸ್ಕರ್)**
ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ
ಕಾರ್ಯಕಾರಿ ಸಮಿತಿ ಅಧ್ಯಕ್ಷರು